# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 707
ಸದಸ್ಯರ ಹೆಸರು : ಡಾ: ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 22-07-2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | 12 ವರ್ಷಗಳಿಂದ ಸರ್ಕಾರಿ ಪ್ರೌಢ ಶಾಲೆಯ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜ ಉಪನ್ಯಾಸಕರಾಗಿ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 71 ಎಸ್‌ಆರ್‌ಇ 94 ದಿನಾಂಕ:27-05-1998ರಲ್ಲಿ ಶೇಕಡ 50ರಷ್ಟು ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 50ರಷ್ಟು ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿತ್ತು. 2014ರಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲಾಗಿದ್ದು, ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 35 ಡಿಜಿಟಿ 2009 ದಿನಾಂಕ:15-05-2014ರಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ನೇಮಕಾತಿಗೆ ಸಂಬಂಧಿಸಿದಂತೆ ನೇರ ನೇಮಕಾತಿಗೆ ಶೇಕಡ 75ರಷ್ಟು ಹುದ್ದೆಗಳನ್ನು ಮತ್ತು ಶೇಕಡ 25ರಷ್ಟು ಹುದ್ದೆಗಳನ್ನು ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗಿರುತ್ತದೆ.<br><br>ಪ್ರಸ್ತುತ, ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ) ಇವರ ಪತ್ರ ದಿನಾಂಕ:02-02-2024 ಮತ್ತು ದಿನಾಂಕ:07-03-2024ರಲ್ಲಿ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಬೇಕಿದ್ದಲ್ಲಿ ಅನುಸರಿಸಬೇಕಾದ ಮಾನದಂಡಗಳ ಕುರಿತು ಸರ್ಕಾರದ ಆದೇಶ ಅವಶ್ಯವಿರುವುದಾಗಿ ತಿಳಿಸಿರುತ್ತಾರೆ. ಅಲ್ಲದೇ ಯಾವುದೇ ಶಾಸನಬದ್ಧ ಆಧಾರವಿಲ್ಲದೇ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಿದ್ದಲ್ಲಿ ಸದರಿ ಪಟ್ಟಿಯನ್ನು ಪ್ರಶ್ನಿಸಿ ಮಾನ್ಯ ನ್ಯಾಯಾಲಯದಲ್ಲಿ ದಾವೆ ಹೂಡಿದ್ದಲ್ಲಿ ಪಟ್ಟಿ ತಯಾರಿಸುವಲ್ಲಿ ಇಲಾಖೆಯ ಕ್ರಮವನ್ನು ಊರ್ಜಿತಗೊಳಿಸುವ ಯಾವುದೇ ದಾಖಲೆಗಳು ಲಭ್ಯವಿಲ್ಲದೇ ಸದರಿ ಪಟ್ಟಿಯನ್ನು ಘನ ನ್ಯಾಯಾಲಯವು |
| ಆ) | ಬಂದಿದ್ದಲ್ಲಿ, ಬಡ್ತಿ ನೀಡದಿರಲು ಕಾರಣವೇನು; | |
| ಇ) | ಯಾವ ಕಾಲಮಿತಿಯೊಳಗೆ ಬಡ್ತಿ ನೀಡಲಾಗುವುದು? | |

ಅನೂರ್ಜಿತಗೊಳಿಸುವ ಸಾಧ್ಯತೆ ಇರುವುದಾಗಿ ತಿಳಿಸಿರುತ್ತಾರೆ. ಈಗ ಜೇಷ್ಠತಾ ನಿಯಮಗಳು 1975ರ ಅನುಸಾರ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದ ವಿಭಾಗವಾರು ಜೇಷ್ಠತಾ ಪಟ್ಟಿಗಳನ್ನು ತಯಾರಿಸಿ ವಿಭಾಗವಾರು ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಬಡ್ತಿ ನೀಡುತ್ತಿರುವ ಪ್ರಕ್ರಿಯೆಯನ್ನು ಪ್ರಶ್ನಿಸುವ ಸಾಧ್ಯತೆ ಇರುವುದಾಗಿ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರಿಗೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ)ರವರು ಪತ್ರ ಮುಖೇನ ತಿಳಿಸಿರುತ್ತಾರೆ.

ಮೇಲಿನಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ) ಇವರ ಪತ್ರಗಳ ಹಿನ್ನೆಲೆಯಲ್ಲಿ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಯಾವುದೇ ನಿರ್ದೇಶನ ಅಥವಾ ಕ್ರಮಕೈಗೊಳ್ಳುವ ಸಕ್ಷಮ ಪ್ರಾಧಿಕಾರ ಸರ್ಕಾರವಾಗಿರುವುದರಿಂದ, ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಅನುಸರಿಸಬೇಕಾದ ಮಾನದಂಡಗಳ ಬಗ್ಗೆ ಸೂಕ್ತ ನಿರ್ದೇಶನ ನೀಡುವಂತೆ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರು ದಿನಾಂಕ:23-04-2024ರಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತುತ ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ)ಯ ನಾಲ್ಕು ವಿಭಾಗಗಳಲ್ಲಿ ಸ್ನಾತಕೋತ್ತರ ಪದವಿ ಪಡೆದ ಅರ್ಹ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಅಂತಿಮ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿ ಮತ್ತು ವಿಷಯವಾರು ಅರ್ಹತಾ ಪಟ್ಟಿಗಳನ್ನು ಸಿದ್ಧಪಡಿಸುವ ಪ್ರಸ್ತಾವನೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯ ಕೋರಲಾಗಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಅಭಿಪ್ರಾಯ ಸ್ವೀಕೃತವಾದ ನಂತರ ನಿಯಮಾನುಸಾರ ಜೇಷ್ಠತಾ ಪಟ್ಟಿಯನ್ನು ಹೊರಡಿಸಿ, ತದನಂತರ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುವುದು.

**ಸಂಖ್ಯೆ: ಇಪಿ 236 ಡಿಜಿಡಬ್ಲ್ಯೂ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.